# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:07ನೇ ಫೆಬ್ರವರಿ, 2018**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಸಿದ್ಧರಾಮಯ್ಯ** (ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ 2016-2017ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ 1 ಮತ್ತು 2) ಸಭೆಯ ಮುಂದಿಡುವುದು.

### 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2018ನೇ ಫೆಬ್ರವರಿ, 05ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:06-02-2018ರಂದು **ಶ್ರೀ ಎಸ್. ರವಿ**ರವರು ಸೂಚಿಸಿದ ಪ್ರಸ್ತಾವದ ಮೇಲಿನ ಚರ್ಚೆ:

....2

## 04. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**01. ಅಂತರ್-ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ (ತಿದ್ದುಪಡಿ) ವಿಧೇಯಕ, 2017**

**ಶ್ರೀ ಕೆ.ಆರ್. ರಮೇಶ್ ಕುಮಾರ್** (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಅಂತರ್-ವಿಷಯ ಆರೋಗ್ಯ ವಿಜ್ಞಾನಗಳು ಮತ್ತು ತಂತ್ರಜ್ಞಾನ ಸಂಸ್ಥೆ (ತಿದ್ದುಪಡಿ)**"ಯನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**02. ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರ ವಿಧೇಯಕ, 2017**

**ಶ್ರೀಮತಿ ಉಮಾಶ್ರೀ** (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರ ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

ಅ) **ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು ಬಾಲ ಸೇವಿಕಾ ತರಬೇತಿ ಪಡೆದು ನರ್ಸರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲಾ ಶಿಕ್ಷಕಿಯರಾಗಿ ಸೇವೆ ಸಲ್ಲಿಸುತ್ತಿರುವವರಿಗೂ ಸಹ ಅನುದಾನಿತ ನೌಕರರಿಗೆ ನೀಡುತ್ತಿರುವಂತೆ ನಿವೃತ್ತಿ ಸೌಲಭ್ಯಗಳನ್ನು ಒದಗಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀ ಐವನ್ ಡಿ'ಸೋಜಾ** ಅವರು ರಾಜ್ಯದಲ್ಲಿರುವ ಅಡಿಕೆ ಬೆಳೆಗಾರರ ಸಮಸ್ಯೆಗಳಿಗೆ ಹಾಗೂ ಅಡಿಕೆ ಬೆಳೆಗೆ ಆಗುವ ತೊಂದರೆಗಳಿಗೆ ಅಡಿಕೆ ಬೆಳೆಗಾರರ ಮಂಡಳಿಯನ್ನು ರಚಿಸುವ ಬಗ್ಗೆ **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ** ಸಚಿವರ ಗಮನ ಸೆಳೆಯುವುದು.

.....3

## ೦೬. ನಿಯಮ ೩೩೦ರ ಮೇರೆಗೆ

ಅ) **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಕಂದಾಯ ಇಲಾಖೆಯ ಗ್ರಾಮ ಮಟ್ಟದ ಗ್ರಾಮಕರಣೀಕರ ಕಛೇರಿಯಲ್ಲಿನ ಮೂಲ ಸೌಕರ್ಯದ ಕೊರತೆ, ಸ್ವಂತ ಕಟ್ಟಡಗಳಿಲ್ಲದೆ ಇರುವುದು ಹಾಗೂ ಸಿಬ್ಬಂದಿ ಕೊರತೆಯಿಂದಾಗಿ ಗ್ರಾಮದ ಕಛೇರಿಯಲ್ಲಿ ಸಾರ್ವಜನಿಕ ಸೇವೆಯಲ್ಲಿ ವಿಳಂಬ ನೀತಿ ಸೇರಿದಂತೆ ಇಲಾಖೆಯಲ್ಲಿನ ಸಮಸ್ಯೆಗಳು ಮತ್ತು ಆಡಳಿತಾತ್ಮಕ ವಿಷಯಗಳಲ್ಲಿನ ಲೋಪದ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

ಆ) **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು ರಾಜ್ಯದಲ್ಲಿನ ಎಲ್ಲಾ ಮಾದರಿಯ ಖಾಸಗಿ ಶಾಲೆಗಳಲ್ಲಿ ಕನ್ನಡ ಭಾಷಾ ಬೋಧನೆಯನ್ನು ಕಡ್ಡಾಯಗೊಳಿಸಿದ್ದು, ಈ ಬಗ್ಗೆ ಖಚಿತಪಡಿಸಿಕೊಳ್ಳಲು ಸಮಿತಿಯನ್ನು ರಚಿಸುವುದು ಮತ್ತು ನಿಯಮವನ್ನು ಉಲ್ಲಂಘನೆ ಮಾಡುವ ಶಾಲೆಗಳಿಗೆ ದಂಡವನ್ನು ವಿಧಿಸುವ ಜೊತೆಗೆ ಮಾನ್ಯತೆಯನ್ನು ರದ್ದುಪಡಿಸುವಂತಹ ಕಠಿಣವಾದ ನಿಯಮಗಳನ್ನು ಜಾರಿಗೊಳಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

## ೦7. ನಿಯಮ ೬೮ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಸರ್ಕಾರದ ಉತ್ತರ

**<u>ಶ್ರೀಯುತರುಗಳಾದ:</u>**

**ಕೆ.ಎಸ್. ಈಶ್ವರಪ್ಪ,**
**ಕ್ಯಾಪ್ಟನ್ ಗಣೇಶ್ ಕಾರ್ಣಿಕ್,**
**ಕೋಟ ಶ್ರೀನಿವಾಸ ಪೂಜಾರಿ,**
**ಅರುಣ ಶಹಾಪುರ,**
**ಎಸ್.ವ್ಹಿ. ಸಂಕನೂರ ಹಾಗೂ ಇತರರು.**

ರಾಜ್ಯದಲ್ಲಿ ನಡೆಯುತ್ತಿರುವ ನಿರಂತರ ಕೊಲೆ, ಸುಲಿಗೆ, ಅತ್ಯಾಚಾರ, ಸರಗಳ್ಳತನ, ಗ್ಯಾಂಗ್‌ವಾರ್‌ಗಳು ಅಲ್ಲದೆ, ಪೋಲೀಸ್ ಇಲಾಖೆಯ ಸಿಬ್ಬಂದಿಗಳ ಮೇಲೆ ಹಲ್ಲೆ ಹಾಗೂ ಜೈಲಿನ ಆವರಣದಲ್ಲೇ ಗುಂಪು ಘರ್ಷಣೆ, ಕೊಲೆ ಇತ್ಯಾದಿಗಳಿಂದಾಗಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯು ವಿಫಲಗೊಂಡಿರುವ ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---